WWW.LIVELAW.IN

**Office of the**
**National Green Tribunal - SLC**
(Constituted as per Hon'ble NGT, Principal Bench, New Delhi, Order O.A. No. 606/2018, Dated 16-01-2019)

# 49, Parisara Bhavan
2nd Floor, Church Street
Bengaluru - 560 001.
Tel : 080-25589112/113
Extn.: 603
Email : ngt.slc2019@gmail.com
Website : www.kspcb.nic.in/NGT

**"Important"**

Ref: NGT-SLC/05/2019-2020/52

Date: 27.08.2019

# ::CIRCULAR::

Sub: Strict Enforcement of Plastic Ban in the state of Karnataka and penalizing Plastic manufacturer as well users-reg.

Ref: 1. Government Gazette Notification No. FEE 17 EPC 2012, dated: 11.03.2016.
2. Government Order No. DPAR 83 RSV 2018, dated: 05.09.2018.
3. Government Circular No. DPAR 10 SRS 2019, dated: 02.07.2019.
4. Government Gazette Notification No. FEE 17 EPC 2012(vol-3), dated: 11.07.2017.

**************

With reference to the above cited subject, by order dated; 16.01.2019, in OA.No.606/2018, the Hon'ble National Green Tribunal (Principal Bench, New Delhi), directed the State Government to constitute a State Level Committee under the Chairmanship **of Justice Sri. Subhash B Adi, (Former Judge, High Court of Karnataka and Upa Lokayukta, Government of Karnataka)** to lookafter the implementation of SWM Rules-2016 in the state of Karnataka.

Accordingly, the Government of Karnataka constituted a Committee vide GO. No. FEE 07 ENG 2019, Bangalore, dated: 13.02.2019.

Thereafter the Committee has convened several meetings & filed visits at several places across Karnataka to review the implementation of SWM Rules-2016.

The details of meetings convened are as follows.

| | | |
|---|---|---|
| **List of Meetings by NGT-SLC(OA No. 606/2018, dated:16.01.2019)** | | |
| **NGT-SLC meeting at State Level** | | |
| 1 | 1st NGT-SLC meeting with all members | 15.02.2019 |
| 2 | 2nd NGT-SLC meeting with all members | 11.03.2019 |
| 3 | 3rd NGT-SLC meeting with all members | 05.04.2019 |
| **BBMP(Bruhat Bangalore Mahanagar Palike)** | | |



Go Green ! Save Earth !! If not today !!! Then never tomorrow !!!!

WWW.LIVELAW.IN

| Sl. No. | Meeting | Date |
|---|---|---|
| 1 | 1st NGT-SLC review meeting with BBMP & succeeding visits to MSW processing sitess | 25.03.2019 |
| 2 | 2nd NGT-SLC review meeting with BBMP on implementation of Rule-17 | 11.04.2019 |
| 3 | 3rd NGT-SLC consultation meeting with experts in SWM | 14.04.2019 |
| 4 | 4th NGT-SLC consultation meeting with TGC members of BBMP | 27.04.2019 |
| 5 | 5th NGT-SLC meeting with Special Commissioner & Joint Commissioners of BBMP | 29.04.2019 |
| 6 | 6th NGT-SLC consultation meeting with BBMP Pourakarmikas union leaders | 09.05.2019 |
| 7 | 7th NGT-SLC consultation meeting with Yelahanka constituency stakeholders | 14.05.2019 |
| 8 | 8th NGT-SLC consultation meeting with Contractors of Vehicle Supply for SWM activity in BBMP | 24.05.2019 |
| 9 | 9th NGT-SLC consultation meeting with BBMP East Zone stakeholders | 27.05.2019 |
| 10 | Visit to MSW Processing Plant at Chikkanagamangala, Bangalore | 30.06.2019 |
| 11 | 10th NGT-SLC consultation meeting with BBMP South Zone stakeholders | 21.07.2019 |
| 12 | 11th NGT-SLC consultation meeting with BBMP councillors to discuss on Hon'ble NGT order dated:02.08.2019 in OA.No. 711/2018 | 13.08.2019 |
| 13 | 12th NGT-SLC consultation meeting with BBMP RR Nagar & Dasarahalli Zones stakeholders meeting | 20.08.2019 |
| | **District/Divisionwise** | |
| 1 | 1st NGT-SLC review meeting of Belagavi Revenue Division meeting(07 Districts) & Visits to MSW processing sites | 15.03.2019 |
| 2 | 2nd NGT-SLC review meeting of Dharwad District & Visits to MSW processing sitess | 01.05.2019 & 02.05.2019 |
| 3 | 3rd NGT-SLC review meeting of Ramanagar District & Visits to Hospitals | 03.05.2019 |

WWW.LIVELAW.IN

| | | |
|---|---|---|
| 4 | 4th NGT-SLC review meeting of Mysore District & Visits to MSW processing sitess | 08.05.2019 |
| 5 | 5th NGT-SLC review meeting of Mandya District & Visits to Hospital, MSW processing sites | 18.05.2019 |
| 6 | 6th NGT-SLC review meeting of Tumakuru District & Visits to MSW processing sitess | 26.05.2019 |
| 7 | 7th NGT-SLC review meeting of Dharwad District & Visits to MSW processing sitess | 28.06.2019 |
| 8 | 8th NGT-SLC review meeting of Bidar District & Hospital, MSW processing sitess | 11.07.2019 |
| 9 | 9th NGT-SLC review meeting of Kalaburagi District & Visits to MSW processing sites, BMW Incineration Plant | 12.07.2019 |
| 10 | 10th NGT-SLC consultation meeting with Cement Industries in Kalaburagi District | 12.07.2019 |
| 11 | 11th NGT-SLC review meeting of Davangere District & Visits to MSW processing sites | 08.08.2019 |
| 12 | 12th NGT-SLC review meeting of Chitradurga District & Visits to MSW processing sites | 09.08.2019 |
| 13 | 13th NGT-SLC review meeting of Dharwad District & Visit to Sankeshwar TMC | 15.08.2019<br>16.08.2019 |

It was noticed that the ULBs including BBMP in Karnataka have not enforced the provisions of Plastic Ban notification published in Gazette as per ref(1) as well as the Plastic Waste Management Rules-2016 notified by MoEF & CC, GoI.

The details of orders are as follows.

1. The Government of Karnataka has banned manufacturing & use of Plastic Carrybags, Baners & Buntings, Flex, Flags, plates, water pot,spoons, kling films,Dinning table sheets & items made up of Thermacoal etc. as per **Government Gazette Notification No. FEE 17 EPC 2012, dated: 11.03.2016.**
2. The Government of Karnataka has banned use of Plastic Carrybags, plates, water pot, spoons, Dining table sheets etc. in Government meetings & functions as per **Government Order No. DPAR 83 RSV 2018, dated: 05.09.2018 Government Circular No. DPAR 10 SRS 2019, dated: 02.07.2019.**
3. The Government of Karnataka has banned use of Plastic Carrybags, Baners & Buntings, Flex, Flags, plates, water pot, spoons, kling films, Dining table sheets & items made up of Thermacoal etc. in temples as well as other religious as per **Government Order No. FEE 17 EPC 2012(vol-3), dated: 11.07.2017.**
4. The PWM Rules-2016 also emphasise on ban of single use plastic items.

Evenafter, Government orders, it was found that there is no substantial enforcement of provisions of orders by the enforcing authorities all over the state.

WWW.LIVELAW.IN

In this connection, I am directed by Hon'ble Chairperson of NGT-SLC, Karnataka to inform all the concerned enforcing authorities to strictly implement the plastic ban notification in their jurisdiction (Schools, Colleges, Universities, Commercial Establishments, Health Care Establishments, Apartments/Houses, Street Vending Zones, Shops, Industries, Government Quarters & Offices, Court Quarters & Premises, Kalyan Mantaps/Choultries, Airports, ULBs etc.) and publish immediately in local newspapers that **31st August-2019** would be deadline after which the manufacturers/distributors/retailers/users of plastic be strictly penalized as per the provisions.

A compliance report in this regard be sent to office of the undersigned.

Member Secretary
National Green Tribuanl-SLC
Karnataka

To,

1. The Additional Chief Secretary, UDD, Vikas Soudha, Bangalore.
2. The Additional Chief Secretary, Health & Family welfare,
3. The Commissioner, BBMP, Corporation Circle, Bangalore.
4. The Additional Chief Secretary, Forest, Environment & Ecology, MS Building,Banaglore.
5. The Principal Secretary, DPAR, Vidhan Soudha, Bangalore.
6. The Principal Secretary, UDD, Vikas Soudha, Bangalore.
7. The Principal Secretary, Law & Parliament, Vikas Soudha, Bangalore.
8. The Principal Secretary, Primary & Secondary Education Department, Vikas Soudha, Bangalore.
9. The Principal Secretary, Higher Education Department, Vikas Soudha, Bangalore.
10. The Principal Secretary, RDPR, MS Building, Bangalore.
11. The Registrar, High Court of Karnataka, Bangalore.
12. The Commissioner, Bangalore Development Authority, Kumapark, Bangalore.
13. The Commissioner, Industries & Commerce, Bangalore.
14. The Commissioner, RDPR, 3rd Floor, Kaveri Bhavan, Banaglore.
15. The Director, DMA, 9th Floor, V.V Tower, Bangalore.
16. The Director, Technical Education, K R Circle, Bangalore.
17. The Deputy Commissioners, All Districts.
18. The Member Secretary, KSPCB, Parisara Bhavan, Banaglore.
19. The Vice Chancellors, All Universities in Karnataka.
20. The ROs/RSEOs, All Regions, KSPCB, Karnataka.
21. The Commissioners/Municipal Commissioners/Chief officers of all ULBs.

WWW.LIVELAW.IN

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ



| ಭಾಗ- IVA | ಬೆಂಗಳೂರು, ಶುಕ್ರವಾರ, ಮಾರ್ಚ್ ೧೧, ೨೦೧೬ (ಪಾಲ್ಗುಣ ೨೧, ಶಕ ವರ್ಷ ೧೯೩೭) | ನಂ. ೩೭೩ |
|---|---|---|
| Part- IVA | Bengaluru, Friday, March 11, 2016 (Palguna 21, Shaka Varsha 1937) | No. 373 |



ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

### ಅಧಿಸೂಚನೆ

ಸಂಖ್ಯೆ: ಅಪಜೀ 17 ಇಪಿಸಿ 2012, ಬೆಂಗಳೂರು, ದಿನಾಂಕ: 11.03.2016.

ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳು ಹಾಗೂ ದೈನಂದಿನ ಬಳಕೆಯಲ್ಲಿರುವ ಇತರೆ ಪ್ಲಾಸ್ಟಿಕ್ ವಸ್ತುಗಳು ಅಲ್ಪಾವಧಿ ಹಾಗೂ ದೀರ್ಘಾವಧಿಯಲ್ಲಿ ಪರಿಸರಕ್ಕೆ ಹಾನಿಯನ್ನು ಮತ್ತು ಆರೋಗ್ಯಕ್ಕೆ ಅಪಾಯವನ್ನು ಉಂಟುಮಾಡಲು ಕಾರಣವಾಗಿರುತ್ತದೆ.

ಭಾರತದ ಸಂವಿಧಾನದ ಕಲಂ-48ಎ ಅನ್ವಯ, ಪ್ರತಿ ರಾಜ್ಯ ಸರ್ಕಾರವೂ ಪರಿಸರದ ಮಟ್ಟವನ್ನು ಉತ್ತಮಪಡಿಸುವ ಜವಾಬ್ದಾರಿಯನ್ನು ಹೊಂದಿರುತ್ತದೆ.

ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚಗಳು, ಕ್ಲಿಂಗ್ ಫಿಲ್ಮ್ಸ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆಗಳು ಮತ್ತು ಥರ್ಮೋಕೋಲ್‌ನಿಂದ ತಯಾರಾದ ವಸ್ತುಗಳ ವ್ಯಾಪಕ ಬಳಕೆಯಿಂದಾಗಿ ಪರಿಸರಕ್ಕೆ ಹಾನಿ ಹಾಗೂ ಮಾನವ ಮತ್ತಿತರ ಪ್ರಾಣಿಗಳ ಆರೋಗ್ಯಕ್ಕೆ ಅಪಾಯ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಪ್ಲಾಸ್ಟಿಕ್ ತ್ಯಾಜ್ಯಗಳು ಚರಂಡಿಗಳ, ಮೋರಿಗಳ ಮತ್ತು ಒಳಚರಂಡಿಗಳ ಸರಾಗ ಹರಿವಿಗೆ ತಡೆಯನ್ನು ಉಂಟುಮಾಡುವುದರ ಜೊತೆಗೆ ನಗರ ಪ್ರದೇಶಗಳಲ್ಲಿನ ಜಲಕಾಯಗಳ ಮಾಲಿನ್ಯಕ್ಕೆ ಕಾರಣವಾಗುತ್ತಿರುವುದನ್ನು ಗಮನಿಸಲಾಗಿದೆ.

ಆದುದರಿಂದ, ಇಂತಹ ಸಮಸ್ಯೆಗಳು ಪುನರಾವರ್ತನೆಯಾಗದಂತೆ ಪರಿಣಾಮಕಾರಿಯಾಗಿ ತಡೆಯುವ ದೃಷ್ಟಿಯಿಂದ, ರಾಜ್ಯ ಸರ್ಕಾರಕ್ಕೆ ಪ್ರದತ್ತವಾಗಿರುವ ಪರಿಸರ (ಸಂರಕ್ಷಣೆ) ಕಾಯಿದೆ 1986ರ ಸೆಕ್ಷನ್ 5ರಲ್ಲಿನ ಅಧಿಕಾರವನ್ನು ಚಲಾಯಿಸಿ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಕ್ಲಿಂಗ್ ಫಿಲ್ಮ್ಸ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್‌ನಿಂದ ತಯಾರಾದಂತಹ ಮೇಲ್ಕಂಡ ವಸ್ತುಗಳ ತಯಾರಿಕೆ, ಸರಬರಾಜು ಮತ್ತು ಬಳಕೆಯನ್ನು ನಿಷೇಧಿಸಿ ಸರ್ಕಾರ ಈ ಕೆಳಗಿನ ನಿರ್ದೇಶನವನ್ನು ಹೊರಡಿಸಿದೆ. ಈ ಅಧಿಸೂಚನೆ ರಾಜ್ಯಪತ್ರದಲ್ಲಿ ಪ್ರಕಟಗೊಂಡ ದಿನಾಂಕದಿಂದ ಜಾರಿಗೆ ಬರುತ್ತದೆ.

### ನಿರ್ದೇಶನ

1. ಯಾವುದೇ ವ್ಯಕ್ತಿ, ಅಂಗಡಿ ಮಾಲೀಕ, ಮಾರಾಟಗಾರ, ಸಗಟುಮಾರಾಟಗಾರ ಅಥವಾ ಚಿಲ್ಲರೆವ್ಯಾಪಾರಿ, ವ್ಯಾಪಾರಿ ಮತ್ತು ಮಾರಾಟಗಾರರು, ಯಾವುದೇ ದಪ್ಪದ ಯಾವುದೇ ರೀತಿಯ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಪ್ಲಾಸ್ಟಿಕ್ ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಕ್ಲಿಂಗ್ ಫಿಲ್ಮ್ಸ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್‌ನಿಂದ ತಯಾರಾದಂತಹ ಮೇಲ್ಕಂಡ ವಸ್ತುಗಳ ಬಳಕೆಯನ್ನು ರಾಜ್ಯದಾದ್ಯಂತ ನಿಷೇಧಿಸಲಾಗಿದೆ. ಮುಂದುವರೆದು, ಯಾವುದೇ ಕೈಗಾರಿಕೆ ಅಥವಾ ವ್ಯಕ್ತಿ ಯಾವುದೇ ದಪ್ಪದ ಯಾವುದೇ ರೀತಿಯ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಪ್ಲಾಸ್ಟಿಕ್

WWW.LIVELAW.IN



ದಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಕ್ಲಿಂಗ್ ಫಿಲ್ಮ್ಸ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್‌ನಿಂದ ತಯಾರಾದಂತಹ ಮೇಲ್ಕಂಡ ವಸ್ತುಗಳ ತಯಾರಿಕೆ, ಸರಬರಾಜು, ಸಂಗ್ರಹಣೆ, ಸಾಗಾಣಿಕೆ, ಮಾರಾಟ ಮತ್ತು ವಿತರಣೆ ಮಾಡುವುದನ್ನು ರಾಜ್ಯಾದ್ಯಂತ ನಿಷೇಧಿಸಿದೆ.

ಪರಂತು, ಈ ಕೆಳಕಂಡ ಸಂದರ್ಭ ಮತ್ತು ಚಟುವಟಿಕೆಗಳಿಗೆ ಬಳಸುವ ಪ್ಲಾಸ್ಟಿಕ್ ವಸ್ತುಗಳಿಗೆ ಈ ಅಧಿಸೂಚನೆಯಿಂದ ವಿನಾಯಿತಿ ನೀಡಲಾಗಿದೆ.

ಅ) ವಿಶೇಷ ಆರ್ಥಿಕ ವಲಯ (SEZ) ಮತ್ತು ರಫ್ತು ಉದ್ದೇಶಿತ ಘಟಕಗಳಲ್ಲಿ (EOU) ಸ್ಥಾಪಿತವಾದ ಪ್ಲಾಸ್ಟಿಕ್ ಉದ್ಯಮದಲ್ಲಿ ರಫ್ತು ಮಾಡುವ ಉದ್ದೇಶಕ್ಕೆಂದು ಪ್ರತ್ಯೇಕವಾಗಿ ಹಾಗೂ ರಫ್ತು ಆರ್ಡರ್ ಮೇರೆಗೆ ಉತ್ಪಾದಿಸಲ್ಪಡುವ ಪ್ಲಾಸ್ಟಿಕ್ ವಸ್ತುಗಳು.

ಆ) ಸಾಮಗ್ರಿಗಳನ್ನು ಬಳಸುವುದಕ್ಕೆ ಮೊದಲು ಉತ್ಪಾದನಾ/ಸಂಸ್ಕರಣಾ ಘಟಕಗಳಲ್ಲಿ ಪ್ಯಾಕ್ ಮಾಡಿ ಸೀಲ್ ಮಾಡಲು ಬಳಸುವ ಹಾಗೂ ಸಾಮಗ್ರಿಗಳ ಪ್ಯಾಕೇಜಿಂಗ್ ಮಾಡುವ ಸಂದರ್ಭದಲ್ಲಿ ಅವಿಭಾಜ್ಯವಾಗಿ ಉಪಯೋಗಿಸುವ ಪ್ಲಾಸ್ಟಿಕ್ ಬ್ಯಾಗ್‌ಗಳು.

ಇ) ಸರ್ಕಾರಿ ಇಲಾಖೆಗಳಿಂದ ಅಥವಾ ಇತರೆ ಸಂಬಂಧಪಟ್ಟ ಸಂಸ್ಥೆಗಳಿಂದ ಸ್ವೀಕೃತವಾದ ಆರ್ಡರ್‌ಗೆ ಎದುರಾಗಿ ಅರಣ್ಯ ಮತ್ತು ತೋಟಗಾರಿಕೆ ನರ್ಸರಿಗಳಲ್ಲಿ ಬಳಸುವ ಪ್ಲಾಸ್ಟಿಕ್ ಚೀಲಗಳು ಹಾಗೂ ಹಾಳೆಗಳು.

ಈ) ಹಾಲು ಮತ್ತು ಹಾಲು ಉತ್ಪನ್ನಗಳ (ಹೈನು ಉತ್ಪನ್ನಗಳು) ಪ್ಯಾಕಿಂಗ್‌ಗೆ ಬಳಸುವ ಪ್ಲಾಸ್ಟಿಕ್‌ಗಳು.

2. ಈ ನಿರ್ದೇಶನವನ್ನು ಕೆಳಗೆ ಪಟ್ಟಿಮಾಡಿರುವ ಅಧಿಕಾರಿಗಳು ಆಯಾ ಹುದ್ದೆಗಳಿಗೆ ನಿಯಮಾನುಸಾರ ಪ್ರದತ್ತವಾಗಿರುವ ಅಧಿಕಾರದಂತೆ ಅವರವರ ಕಾರ್ಯವ್ಯಾಪ್ತಿಯಲ್ಲಿ ಜಾರಿಗೊಳಿಸಬಹುದಾಗಿರುತ್ತದೆ:

ಅ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಯುಕ್ತರು, ಜಂಟಿ ಆಯುಕ್ತರುಗಳು, ಕಂದಾಯ ಅಧಿಕಾರಿಗಳು, ಪಾಲಿಕೆಯ ಎಲ್ಲಾ ಸಾರ್ವಜನಿಕ ಆರೋಗ್ಯಾಧಿಕಾರಿಗಳು ಮತ್ತು ಎಲ್ಲಾ ಅಭಿಯಂತರರು.

ಆ. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.

ಇ. ರಾಜ್ಯದ ಎಲ್ಲಾ ನಗರ ಸಭೆ ಆಯುಕ್ತರು, ಮುಖ್ಯಾಧಿಕಾರಿಗಳು, ನಗರ ಸಭೆ ಆರೋಗ್ಯಾಧಿಕಾರಿಗಳು ಮತ್ತು ಎಲ್ಲಾ ಅಭಿಯಂತರರು.

ಈ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸಹಾಯಕ ಪರಿಸರ ಅಧಿಕಾರಿ, ಉಪ ಪರಿಸರ ಅಧಿಕಾರಿ, ಪರಿಸರ ಅಧಿಕಾರಿ ಮತ್ತು ಹಿರಿಯ ಪರಿಸರ ಅಧಿಕಾರಿಗಳು.

ಉ. ಕಂದಾಯ ಉಪ ವಿಭಾಗದ ಎಲ್ಲಾ ಸಹಾಯಕ ಆಯುಕ್ತರುಗಳು.

ಊ. ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರು.

ಋ. ವಾಣಿಜ್ಯ ತೆರಿಗೆ ಇಲಾಖೆಯ ಎಲ್ಲಾ ಅಧಿಕಾರಿಗಳು.

ಎ. ಆಹಾರ ಮತ್ತು ನಾಗರೀಕ ಪೂರೈಕೆ ಇಲಾಖೆಯ ಎಲ್ಲಾ ಅಧಿಕಾರಿಗಳು.

ಏ. ತೂಕ ಮಾಪನ ಮತ್ತು ಅಳತೆ ಇಲಾಖೆಯ ನಿಯಂತ್ರಕರು, ಉಪ ನಿಯಂತ್ರಕರು, ಪ್ರಾದೇಶಿಕ ಅಧಿಕಾರಿಗಳು.

3. ಈ ನಿರ್ದೇಶನವನ್ನು ಉಲ್ಲಂಘಿಸಿದ ಸಂದರ್ಭದಲ್ಲಿ ಕೆಳಕಂಡ ಅಧಿಕಾರಿಗಳು ಅಪರಾಧದ ಸ್ವರೂಪಕ್ಕೆ ಅನುಗುಣವಾಗಿ ಪರಿಸರ (ಸಂರಕ್ಷಣೆ) ಕಾಯಿದೆ, 1986ರ ಸೆಕ್ಷನ್ 19ರ ಅನ್ವಯ ಪ್ರದತ್ತವಾಗಿರುವ ಅಧಿಕಾರದಂತೆ ಈ ಅಧಿಸೂಚನೆಯನ್ನು ಉಲ್ಲಂಘಿಸಿದವರ ಮೇಲೆ ಆಯಾ ವ್ಯಾಪ್ತಿಯಲ್ಲಿ ಬರುವ ನ್ಯಾಯಾಲಯದಲ್ಲಿ ಮೊಕದ್ದಮೆಯನ್ನು ಹೂಡಲು ಕ್ರಮ ಜರುಗಿಸುವುದು.

ಅ. ಸರ್ಕಾರದ ಕಾರ್ಯದರ್ಶಿ (ಪರಿಸರ ಮತ್ತು ಜೀವಿಶಾಸ್ತ್ರ) ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

ಆ. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು

ಇ. ಕಂದಾಯ ಇಲಾಖೆಯ ಎಲ್ಲಾ ಸಹಾಯಕ ಆಯುಕ್ತರುಗಳು.

ಈ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಗಳು.

ಉ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಎಲ್ಲಾ ಪ್ರಾದೇಶಿಕ ಪರಿಸರ ಅಧಿಕಾರಿಗಳು.

ವಿವರಣೆ 1 – "ಪ್ಲಾಸ್ಟಿಕ್" ಎಂದರೆ ಪಾಲಿ ಪ್ರೊಪೈಲಿನ್ (PP), ನಾನ್-ಓವನ್ ಪಾಲಿ ಪ್ರೊಪೈಲಿನ್, ಮಲ್ಟಿ ಲೇಯರ್ಡ್ ಕೊ-ಎಕ್ಸ್‌ಟ್ರೂಡರ್ ಪಾಲಿ ಪ್ರೊಪೈಲಿನ್, ಪಾಲಿ ಇತಲಿನ್ (PE), ಪಾಲಿ ವಿನ್ಯಲ್ ಕ್ಲೋರೈಡ್ (PVC), ಹೈ ಮತ್ತು ಲೋ ಡೆನ್ಸಿಟಿ ಪಾಲಿ ಇತಲಿನ್ (HDPE & LDPE), ಥರ್ಮೋಕೋಲ್ ಎಂದು ಕರೆಯಲ್ಪಡುವ ಪಾಲಿ ಸ್ಟಿರಿನ್ (PS), ಪಾಲಿ

WWW.LIVELAW.IN



ಅಮೈಡ್ಸ್ (ನೈಲಾನ್), ಪಾಲಿ ಟೆರೆಫ್ಥಲೇಟ್ (PT), ಪಾಲಿ ಮೀಥೈಲ್ ಮೆಥಕ್ರಿಲೇಟ್ (PMM) ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್‌ಗಳಿಂದ ತಯಾರಾದ ಈ ನಿರ್ದೇಶನದಲ್ಲಿ ಹೆಸರಿಸಲ್ಪಟ್ಟಿರುವ ಎಲ್ಲಾ ವಸ್ತುಗಳು.

ವಿವರಣೆ 2 – "ಕ್ಯಾರಿಬ್ಯಾಗ್" ಎಂಬ ಶಬ್ದಕ್ಕೆ ಪ್ಲಾಸ್ಟಿಕ್ ತ್ಯಾಜ್ಯ (ನಿರ್ವಹಣೆ ಮತ್ತು ನಿಭಾವಣೆ) ನಿಯಮಗಳು 2011ರ ನಿಯಮ 3 (ಬಿ)ರಲ್ಲಿ ನೀಡಿರುವ ವ್ಯಾಖ್ಯಾನವನ್ನು ಯಥಾವತ್ತಾಗಿ ಬಳಸುವುದು. ಈ ವ್ಯಾಖ್ಯಾನದಲ್ಲಿ ಯಾವುದೇ ಸಾಮಗ್ರಿಗಳನ್ನು ಬಳಸುವುದಕ್ಕೆ ಮೊದಲು ಪ್ಯಾಕ್ ಮಾಡಿ ಸೀಲ್ ಮಾಡಿರುವ ಪ್ಯಾಕೇಜಿಂಗ್ ಪ್ಲಾಸ್ಟಿಕ್‌ಗಳು ಸೇರಿರುವುದಿಲ್ಲ.

ವಿವರಣೆ 3 – ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಪ್ಲಾಸ್ಟಿಕ್ ತ್ಯಾಜ್ಯ (ನಿರ್ವಹಣೆ ಮತ್ತು ನಿಭಾವಣೆ) ನಿಯಮಗಳು 2011ರ ನಿಯಮ(4)ರ ಷರತ್ತು (ಎ) ನಲ್ಲಿ ಪಟ್ಟಿಮಾಡಲಾಗಿರುವ ಕಾರ್ಯಗಳನ್ನು ಜಾರಿಗೊಳಿಸುವ ಅಧಿಕಾರವನ್ನು ಹೊಂದಿದ್ದು ಇನ್ನುಳಿದ ಸ್ಥಳೀಯ ಸಂಸ್ಥೆಗಳು ನಿಯಮ (4)ರ ಷರತ್ತು (ಬಿ)ನಲ್ಲಿ ಪಟ್ಟಿಮಾಡಲಾಗಿರುವ ಕಾರ್ಯಗಳನ್ನು ನಿರ್ವಹಿಸುವ ಅಧಿಕಾರವನ್ನು ಹೊಂದಿರುತ್ತವೆ.

ವಿವರಣೆ 4 – ಭಾರತ ಸರ್ಕಾರವು ಹೊರಡಿಸಿರುವ ಅಧಿಸೂಚನೆ ಸಂ:ಎಸ್.ಒ.394(ಇ), ದಿನಾಂಕ:16.04.1987ರಲ್ಲಿ ಹಾಗೂ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಪಟ್ಟಿಮಾಡಲಾಗಿರುವ ಎಲ್ಲಾ ಅಧಿಕಾರಿಗಳು ಈ ಅಧಿಸೂಚನೆಯನ್ನು ಉಲ್ಲಂಘಿಸಿದವರ ವಿರುದ್ಧ ಸಂಬಂಧಪಟ್ಟ ನ್ಯಾಯಾಲಯದಲ್ಲಿ ಪರಿಸರ (ಸಂರಕ್ಷಣೆ) ಕಾಯಿದೆ, 1986ರ ಸೆಕ್ಷನ್ 19ರಡಿ ದೂರುಗಳನ್ನು ದಾಖಲಿಸುವ ಅಧಿಕಾರವನ್ನು ಹೊಂದಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಮಹೇಂದ್ರ ಜೈನ್
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

## FOREST, ECOLOGY AND ENVIRONMENT SECRETARIAT

## NOTIFICATION

**No. FEE 17 EPC 2012, Bangalore, Dated: 11.03.2016**

Whereas, plastic carry bags and other plastic items used in daily life cause short term and long term environmental damage and health hazard;

And whereas, Article 48-A of the Constitution of India, inter alia, envisages that the State shall endeavor to protect and improve the environment;

And whereas, it has come to the knowledge of the Government that, the use of plastic carry bags, banners, buntings, flex, plastic flags, plastic plates, plastic cups, plastic spoons, cling films and plastic sheets used for spreading on dining table and items that are made of thermocol are causing serious environmental hazards and affects health of human beings as well as animals;

And whereas, it is observed that the plastic wastes is also causing blockage of gutters, sewers and drains apart from resulting in pollution of water bodies in urban areas;

And whereas, with a view to prevent the recurrence of such problems, the State Government in exercise of the powers conferred under Section 5 of the Environment (Protection) Act, 1986, issues the following directions imposing ban on manufacture, supply, sale and use of plastic carry bags, plastic banners, plastic buntings, flex, plastic flags, plastic plates, plastic cups, plastic spoons, cling films and plastic sheets used for spreading on dining table including the above items made of thermocol and plastic which use plastic micro beads in the state. This notification comes into effect from the date of its publication in the Official Gazette.

## DIRECTION

1. No person including shopkeeper, vendor, wholesaler, retailer, trader, hawker or salesmen shall use plastic carry bags, plastic banners, plastic buntings, flex, plastic flags, plastic plates, plastic cups, plastic spoons, cling films and plastic sheets used for spreading on dining table irrespective of thickness including the above items made of thermocol and plastic which use plastic micro beads. Further, no industry or person shall manufacture, supply, store, transport, sale and/or distribute plastic carry bags, plastic banners, plastic buntings, flex, plastic flags, plastic plates, plastic cups, plastic spoons, cling films and plastic sheets used for spreading on

WWW.LIVELAW.IN


dining table irrespective of their thickness including the above items made of thermocol and plastic which use plastic micro beads in the State.

Provided that, the plastic used for the following purposes and circumstances are exempted from this notification;

a) The plastic carry bags manufactured exclusively for export purpose against any export orders in a plastic industry located in Special Economic Zone (SEZ) and Export Oriented Units (EOU).
b) The plastic bags which constitute or form an integral part of packaging in which goods are sealed prior to use at manufacturing/processing units.
c) The plastic bags and sheets used in Forestry and Horticulture nurseries against the orders from the Govt Departments or from the firms concerned.
d) The plastic used for packing of milk and milk products (dairy products).

2. That the following Officers shall enforce this direction in exercise of power conferred on them by law in their jurisdiction.
    a) The Commissioner, Joint Commissioners, Revenue Officers, all Health Officers and all Engineers of BBMP.
    b) All Deputy Commissioners of the districts.
    c) All Commissioners of City Corporations, Chief Officers, Health Officers and all Engineers of Urban Local Bodies.
    d) All Assistant Environmental Officers, Deputy Environmental Officers, Environmental Officers and Senior Environmental Officers of KSPCB.
    e) All Assistant Commissioners of Revenue Sub Divisions.
    f) Tahsildars of all Taluks.
    g) All officers of Commercial Tax Department.
    h) All officers of Department of Food and Civil supplies.
    i) The Controller, Deputy Controller and Regional Officers of Legal Metrology Department.
3. That the following officers shall take cognizance of offences and initiate legal action in case of noncompliance of this direction as per the powers conferred on them under section 19 of the Environment (Protection) Act, 1986 and to file complaint in the jurisdictional court of law on all violators.
    a) Secretary to Government (Ecology & Environment), Forest, Environment and Ecology Department.
    b) Chairman and Member Secretary, KSPCB.
    c) Deputy Commissioners of the Districts.
    d) Assistant Commissioners of Revenue Sub Divisions.
    e) Regional Officers of KSPCB.

**Explanation 1-** "Plastic" means any of the items mentioned in this direction made out of poly propylene (PP), non-woven poly propylene, multi layered co-extruder poly propylene, poly ethylene (PE), poly vinyl chloride (PVC), high and low density poly ethylene (HDPE & LDPE), poly styrene (PS) which is also called thermocol, poly amides (Nylon), poly terephthalate (PT), poly methyl methacrylate (PMM) and plastic micro beads.

**Explanation 2-** The word "carry bag" will have the same meaning that is provided in Rule 3 (b) of the Plastic Waste (Management and Handling) Rules, 2011. In this definition exemption is provided for plastic bag that constitute or form an integral part of packaging in which goods are sealed prior to use.

**Explanation 3-** Karnataka State Pollution Control Board shall be responsible for enforcement regarding the functions specified in clause (a) of Rule 4 of the Plastic Waste (Management and Handling) Rules, 2011 and Urban Local Bodies shall be responsible for enforcement regarding the functions specified in clause (b) of rule 4 of the said Rules;

**Explanation 4-** Officers as mentioned in Government of India's Notification No.S.O.394 (E) dated 16.04.1987 amended from time to time are authorized to file complaints against violation of directions included in this Notification under Section 19 of the Environment (Protection) Act, 1986.

By Order & in the name of the Governor of Karnataka,

**Mahendra Jain**
Additional Chief Secretary to Government,
Forest, Ecology and Environment Department

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪ್ರ) 500 ಪ್ರತಿಗಳು)

WWW.LIVELAW.IN

# ಕರ್ನಾಟಕ ಸರ್ಕಾರ

ಸಂಖ್ಯೆ: ಅಪಜೀ 17 ಇಪಿಸಿ 2012 (ಭಾ-3)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 11.07.2017.

## ಸುತ್ತೋಲೆ

ವಿಷಯ:- ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 17 ಇಪಿಸಿ 2012, ದಿನಾಂಕ:11.03.2016 ರ ಪ್ಲಾಸ್ಟಿಕ್ ನಿಷೇಧ ಅಧಿಸೂಚನೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಕುರಿತು.

*******

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 17 ಇಪಿಸಿ 2012, ದಿನಾಂಕ:11.03.2016ರನ್ವಯ ರಾಜ್ಯಾದ್ಯಂತ ಕೆಲವು ಆಯ್ದ ಪ್ಲಾಸ್ಟಿಕ್ ವಸ್ತುಗಳನ್ನು ನಿಷೇಧಿಸಿ ಆದೇಶ ಹೊರಡಿಸಲಾಗಿದೆ. ಸದರಿ ಅಧಿಸೂಚನೆಯನ್ವಯ ಪ್ಲಾಸ್ಟಿಕ್ ನಿಷೇಧವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸಂಬಂಧಪಟ್ಟ ಇಲಾಖೆ/ ಪ್ರಾಧಿಕಾರಗಳ ಅಧಿಕಾರಿಗಳು ಆಯಾ ಹುದ್ದೆಗಳಿಗೆ ನಿಯಮಾನುಸಾರ ಪ್ರದತ್ತವಾಗಿರುವ ಅಧಿಕಾರದಂತೆ ಅವರವರ ಕಾರ್ಯ ವ್ಯಾಪ್ತಿಯಲ್ಲಿ ಜಾರಿಗೊಳಿಸಬಹುದಾಗಿರುತ್ತದೆ. ಅದರಂತೆ ಸಂಬಂಧಪಟ್ಟ ಅನುಷ್ಠಾನ ಅಧಿಕಾರಿಗಳು ಪ್ಲಾಸ್ಟಿಕ್ ನಿಷೇಧವನ್ನು ಅನುಷ್ಠಾನಗೊಳಿಸುವಲ್ಲಿ ಕಾರ್ಯನಿರತರಾಗಿರುತ್ತಾರೆ. ಆದರೆ, ಕೆಲವು ಸಂಸ್ಥೆಗಳು **ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳ ಸಂಪೂರ್ಣ ನಿಷೇಧವಿದ್ದಾಗ್ಯೂ ಸಹ "ನಾನು ಪ್ಲಾಸ್ಟಿಕ್ ಅಲ್ಲ" (I am not plastic, biobased), ಜೈವಿಕ ಆಧಾರಿತ** ಎಂದು ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳ ಮೇಲೆ ಮುದ್ರಿಸಿ ಜೈವಿಕ ವಸ್ತುಗಳಿಂದ ತಯಾರಾಗಿದ್ದು ಜೈವಿಕ ವಿಘಟನೆ ಹೊಂದಬಲ್ಲ ಕ್ಯಾರಿಬ್ಯಾಗ್ ಎಂದು ಹೇಳಲ್ಪಡುವ ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳನ್ನು ಅಂಗಡಿ, ಮಳಿಗೆ, ಮಾಲ್‌ಗಳಲ್ಲಿ, ಮಾರುಕಟ್ಟೆಗಳಲ್ಲಿ ಎಗ್ಗಿಲ್ಲದೇ ಮಾರಾಟ ಮಾಡುತ್ತಿರುವುದು ಹಾಗೂ ಬಳಕೆ ಮಾಡುತ್ತಿರುವುದು ಕಂಡುಬರುತ್ತಿದೆ. ಈ ಮೂಲಕ ಕ್ಯಾರಿಬ್ಯಾಗ್‌ಗಳನ್ನು ಬಳಕೆ ಮಾಡುವ ಕುರಿತು ಸಾರ್ವಜನಿಕರಲ್ಲಿ ಗೊಂದಲವನ್ನು ಉಂಟುಮಾಡಲಾಗುತ್ತಿದೆ ಮತ್ತು ಸರ್ಕಾರದ ಆದೇಶವನ್ನು ಉಲ್ಲಂಘಿಸಲಾಗುತ್ತಿದೆ.

2. ಸದರಿ ಕ್ಯಾರಿಬ್ಯಾಗ್‌ಗಳು ಜೈವಿಕ ವಸ್ತುಗಳಿಂದ ತಯಾರಾಗಿವೆ ಎಂಬುದಕ್ಕೆ ಯಾವುದೇ ಪುರಾವೆ ಇರುವುದಿಲ್ಲ ಅಲ್ಲದೇ ಇಂತಹ ಕ್ಯಾರಿಬ್ಯಾಗ್‌ಗಳನ್ನು ಮಾರಾಟ ಮತ್ತು ಬಳಕೆ ಮಾಡಲು ಸರ್ಕಾರದಿಂದ ಯಾವುದೇ ಅನುಮತಿ ನೀಡಿರುವುದಿಲ್ಲ. ಮುಂದುವರೆದು, ಕ್ಯಾರಿಬ್ಯಾಗ್‌ಗಳ ಮೇಲೆ ವಿವಿಧ ಚಿತ್ರ ಅಥವಾ ಅಕ್ಷರಗಳನ್ನು ಮುದ್ರಣ ಮಾಡುವಾಗ ಅತ್ಯಂತ ವಿಷಕಾರಿ ವಸ್ತುವಾದ ಸೀಸ (Lead) ವನ್ನು ಬಳಕೆ ಮಾಡುವುದರಿಂದ ಅಪಾಯಕಾರಿಯಾಗಿರುತ್ತದೆ.

3. ಈ ಹಿನ್ನಲೆಯಲ್ಲಿ ಯಾವುದೇ ಅಂಗಡಿ, ಮಳಿಗೆ, ಮಾಲ್, ಮಾರುಕಟ್ಟೆಯಲ್ಲಾಗಲೀ ಅಥವಾ ಸಾರ್ವಜನಿಕರಾಗಲೀ ಜೈವಿಕ ಆಧಾರಿತ ಎಂದು ಹೇಳಲ್ಪಡುವ ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳನ್ನು ಮಾರಾಟ ಮಾಡುವುದಾಗಲೀ, ಬಳಕೆ ಮಾಡುವುದಾಗಲೀ ಅಥವಾ ಉತ್ಪಾದನೆ ಮಾಡುವುದಾಗಲೀ ಕಂಡುಬಂದಲ್ಲಿ ಕೂಡಲೇ ಅಂತಹ ವ್ಯಕ್ತಿ / ಸಂಸ್ಥೆಗಳ ಮೇಲೆ ಕ್ರಮ ಕೈಗೊಂಡು ಸದರಿ ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳನ್ನು ವಶ ಪಡಿಸಿಕೊಳ್ಳುವಂತೆ ಆದೇಶಿಸಲಾಗಿದೆ.

4. ಇಂತಹ ಕ್ಯಾರಿಬ್ಯಾಗ್‌ಗಳನ್ನು ಬಳಕೆ, ಮಾರಾಟ ಮಾಡದಂತೆ ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವಲ್ಲಿ ಅಗತ್ಯ ಕ್ರಮ ವಹಿಸುವಂತೆ ಎಲ್ಲಾ ಅನುಷ್ಠಾನಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

WWW.LIVELAW.IN

ಸದರಿ ನಿರ್ದೇಶನಗಳನ್ನು ಪಾಲಿಸುವ ಮೂಲಕ ಪ್ಲಾಸ್ಟಿಕ್ ನಿಷೇಧ ಅಧಿಸೂಚನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಆದೇಶಿಸಲಾಗಿದೆ.

(ಹೆಚ್.ಸಿ ರಾಜೇಂದ್ರ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ),
(ಜೀವಿಪರಿಸ್ಥಿತಿ ಮತ್ತು ಪರಿಸರ)
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ.

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ – ಇವರಿಗೆ ಇಂದಿನ ಸಂಚಿಕೆಯಲ್ಲಿ ಪ್ರಕಟಿಸಿ ಅದರ 200 ಪ್ರತಿಗಳನ್ನು ಇಲಾಖೆಯ ಉಪಯೋಗಕ್ಕಾಗಿ ಒದಗಿಸುವಂತೆ ಕೋರಿದೆ.

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, "ಪರಿಸರ ಭವನ" 1 ರಿಂದ 5ನೇ ಮಹಡಿ, ಚರ್ಚ್ ಸ್ಟ್ರೀಟ್, ಬೆಂಗಳೂರು–560 001.
8. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
10. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
11. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
12. ಡೈರೆಕ್ಟರ್ ಜನರಲ್, ಎಂಪ್ರಿ (EMPRI), ಹಸಿರು ಭವನ, ದೊರೆಸಾನಿಪಾಳ್ಯ ಫಾರೆಸ್ಟ್ ಕ್ಯಾಂಪಸ್, ವಿನಾಯಕನಗರ ವೃತ್ತ, ಜೆ.ಪಿ.ನಗರ 5ನೇ ಹಂತ, ಬೆಂಗಳೂರು–560 078.
13. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
14. ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
15. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ
16. ಸರ್ಕಾರದ ಕಾರ್ಯದರ್ಶಿಗಳು (ಜೀವಿಪರಿಸ್ಥಿತಿ ಮತ್ತು ಪರಿಸರ), ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ.
17. ವಿಶೇಷ ನಿರ್ದೇಶಕರು (ತಾಂತ್ರಿಕ ಕೋಶ), (ಜೀವಿಪರಿಸ್ಥಿತಿ ಮತ್ತು ಪರಿಸರ), ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
18. ಹೆಚ್ಚುವರಿ ಪ್ರತಿಗಳು / ಶಾಖಾ ರಕ್ಷಾ ಕಡತಕ್ಕೆ.

WWW.LIVELAW.IN

# ಕರ್ನಾಟಕ ಸರ್ಕಾರ

ಸಂಖ್ಯೆ: ಅಪಜೀ 17 ಇಪಿಸಿ 2012 (ಭಾ-3)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:11.07.2017.

## ಸುತ್ತೋಲೆ

ವಿಷಯ:- ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 17 ಇಪಿಸಿ 2012, ದಿನಾಂಕ:11.03.2016 ರ ಪ್ಲಾಸ್ಟಿಕ್ ನಿಷೇಧ ಅಧಿಸೂಚನೆಯನ್ನು ದೇವಾಲಯ ಮತ್ತು ಇನ್ನಿತರ ಧಾರ್ಮಿಕ ಸಂಸ್ಥೆಗಳಲ್ಲಿ ಪರಿಣಾಮಕಾರಿಯಾಗಿ ಜಾರಿಗೊಳಿಸುವ ಕುರಿತು.

*******

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಅಪಜೀ 17 ಇಪಿಸಿ 2012, ದಿನಾಂಕ:11.03.2016ರನ್ವಯ ರಾಜ್ಯಾದ್ಯಂತ ಕೆಲವೊಂದು ಪ್ಲಾಸ್ಟಿಕ್ ವಸ್ತುಗಳ ನಿಷೇಧವನ್ನು ಜಾರಿಗೊಳಿಸಲಾಗಿದೆ. ಅಧಿಸೂಚನೆಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಅಧಿಸೂಚನೆಯಲ್ಲಿ ಯಾವುದೇ ವ್ಯಕ್ತಿ, ಅಂಗಡಿ ಮಾಲೀಕ, ಮಾರಾಟಗಾರ, ಸಗಟುಮಾರಾಟಗಾರ ಅಥವಾ ಚಿಲ್ಲರೆವ್ಯಾಪಾರಿ, ವ್ಯಾಪಾರಿ ಮತ್ತು ಮಾರಾಟಗಾರರು, ಯಾವುದೇ ದಪ್ಪದ ಯಾವುದೇ ರೀತಿಯ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಪ್ಲಾಸ್ಟಿಕ್ ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಕ್ಲಿಂಗ್ ಫಿಲ್ಮ್ಸ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್‌ನಿಂದ ತಯಾರಾದಂತಹ ಮೇಲ್ಕಂಡ ವಸ್ತುಗಳ ಬಳಕೆಯನ್ನು ರಾಜ್ಯದಾದ್ಯಂತ ನಿಷೇಧಿಸಲಾಗಿದೆ. ✓

2. ಮುಂದುವರೆದು, ಯಾವುದೇ ಕೈಗಾರಿಕೆ ಅಥವಾ ವ್ಯಕ್ತಿ ಯಾವುದೇ ದಪ್ಪದ ಯಾವುದೇ ರೀತಿಯ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಪ್ಲಾಸ್ಟಿಕ್ ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಕ್ಲಿಂಗ್ ಫಿಲ್ಮ್ಸ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್‌ನಿಂದ ತಯಾರಾದಂತಹ ಮೇಲ್ಕಂಡ ವಸ್ತುಗಳ ತಯಾರಿಕೆ, ಸರಬರಾಜು, ಸಂಗ್ರಹಣೆ, ಸಾಗಾಣಿಕೆ, ಮಾರಾಟ ಮತ್ತು ವಿತರಣೆ ಮಾಡುವುದನ್ನು ರಾಜ್ಯಾದ್ಯಂತ ನಿಷೇಧಿಸಿದೆ.

M.S., K.S.P.C.B.

3. ಈ ಹಿನ್ನಲೆಯಲ್ಲಿ ರಾಜ್ಯಾದ್ಯಂತ ಇರುವ ಮಂದಿರಗಳು, ದೇವಸ್ಥಾನ ಹಾಗೂ ಧಾರ್ಮಿಕ ಕೇಂದ್ರಗಳಲ್ಲಿ ಪ್ಲಾಸ್ಟಿಕ್ ನಿಷೇಧಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ನಿರ್ದೇಶನಗಳನ್ನು ಕಡ್ಡಾಯವಾಗಿ ಜಾರಿಗೆ ತರುವಂತೆ ಕೋರಲಾಗಿದೆ.

- ದೇವಾಲಯದ ಆವರಣದಲ್ಲಿ ಹಾಗೂ ಹೊರಗಡೆ ನಿಷೇಧಿತ ಪ್ಲಾಸ್ಟಿಕ್ ವಸ್ತುಗಳಾದ ಪ್ಲಾಸ್ಟಿಕ್‌ನಿಂದ ತಯಾರಿಸಲಾದ ಕ್ಯಾರಿಬ್ಯಾಗ್, ತಟ್ಟೆ, ಲೋಟ, ಬಟ್ಟಲು, ಬ್ಯಾನರ್ಸ್, ಬಂಟಿಂಗ್ಸ್ ಮುಂತಾದ ನಿಷೇದಿತ ಪ್ಲಾಸ್ಟಿಕ್ ವಸ್ತುಗಳನ್ನು ಯಾವುದೇ ರೀತಿಯಲ್ಲಿ ಬಳಕೆ ಮಾಡಬಾರದು.
- ದೇವಸ್ಥಾನ/ಧಾರ್ಮಿಕ ಕೇಂದ್ರದ ಪ್ರಾಂಗಣದಲ್ಲಿ "ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸಲಾಗಿದೆ" ಎಂಬ ಫಲಕವನ್ನು ಅಳವಡಿಸುವ ಮೂಲಕ

WWW.LIVELAW.IN

ಮಂದಿರ/ದೇವಸ್ಥಾನಗಳಿಗೆ ಬರುವ ಸಾರ್ವಜನಿಕರು ಹಾಗೂ ಭಕ್ತರಲ್ಲಿ ಜಾಗೃತಿ ಮೂಡಿಸುವಂತೆ ಕೋರಲಾಗಿದೆ.

- ದೇವಸ್ಥಾನದಲ್ಲಿ ಪ್ರತಿದಿನ ಪ್ರಸಾದವನ್ನು ವಿತರಿಸಲು ಯಾವುದೇ ರೀತಿಯ ಪ್ಲಾಸ್ಟಿಕ್ ತಟ್ಟೆ, ಕಪ್ ಅಥವಾ ಬಟ್ಟಲನ್ನು ಉಪಯೋಗಿಸದಿರುವುದು.
- ಪೂಜಾ ಸಾಮಾಗ್ರಿಗಳನ್ನು ಪ್ಲಾಸ್ಟಿಕ್ ಕ್ಯಾರಿಬ್ಯಾಗ್‌ಗಳಲ್ಲಿ ತರದಂತೆ ಭಕ್ತರಿಗೆ ಸೂಚನೆ ನೀಡುವುದು.
- ದೇವರ ಪೂಜೆ ಮತ್ತು ಅಭಿಷೇಕಕ್ಕೆ ಪ್ರಸಾದ, ದೀಪದ ಎಣ್ಣೆ, ಹಾಲು, ತುಪ್ಪ ಊದುಬತ್ತಿ, ಅರಿಶಿನ, ಕುಂಕುಮ, ಕರ್ಪೂರ, ಹೂವು ಇನ್ನಿತರ ಅಗತ್ಯ ಪೂಜಾ ಸಾಮಾಗ್ರಿಗಳನ್ನು ತರಲು ಯಾವುದೇ ಪ್ಲಾಸ್ಟಿಕ್ ಕವರ್ ಬಳಸದೇ ಭಕ್ತರು ತಮ್ಮದೇ ಬಟ್ಟೆ, ಕಾಗದದ ಕೈಚೀಲಗಳಲ್ಲಿ, ಸ್ಟೀಲ್ ಅಥವಾ ಇನ್ನಿತರ ಲೋಹ/ಮಣ್ಣಿನ ಪಾತ್ರೆಗಳಲ್ಲಿ ತರುವಂತೆ ಕಡ್ಡಾಯ ಸೂಚನೆ ನೀಡುವುದು.
- ಹಬ್ಬ ಹರಿದಿನಗಳಲ್ಲಿ ಅಥವಾ ವಿಶೇಷ ಸಂದರ್ಭಗಳಲ್ಲಿ ಜಾಹೀರಾತು ನೀಡಲು ಯಾವುದೇ ಪ್ಲಾಸ್ಟಿಕ್‌ನಿಂದ ತಯಾರಿಸಿದ ಬ್ಯಾನರ್ಸ್ ಮತ್ತು ಬಂಟಿಂಗ್ಸ್ ಬಳಸದಂತೆ ಕ್ರಮ ವಹಿಸುವುದು.
- ಯಾವುದೇ ರೀತಿಯ ಪ್ಲಾಸ್ಟಿಕ್‌ನಿಂದ ತಯಾರಿಸಿದ ಅಲಂಕಾರಿಕಾ ಹೂವು, ತೋರಣ ಮುಂತಾದವುಗಳನ್ನು ದೇವಸ್ಥಾನದಲ್ಲಿ ಬಳಸದಂತೆ ಜಾಗ್ರತೆ ವಹಿಸುವುದು.
- ರಥೋತ್ಸವ ಮುಂತಾದ ವಿಶೇಷ ಸಂದರ್ಭಗಳಲ್ಲಿ ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಿದ ಸಂದರ್ಭದಲ್ಲಿ ಪ್ಲಾಸ್ಟಿಕ್ ನಿಂದ ತಯಾರಿಸಲಾದ ತಟ್ಟೆ, ಕಪ್, ಬಟ್ಟಲು ಮತ್ತು ಪ್ಲಾಸ್ಟಿಕ್ ಹಾಳೆಗಳನ್ನು ಉಪಯೋಗಿಸದೇ ಅಡಿಕೆ ತಟ್ಟೆ, ಬಾಳೆ ಎಲೆ ಮುಂತಾದ ನೈಸರ್ಗಿಕ ವಸ್ತುಗಳನ್ನು ಉಪಯೋಗಿಸಲು ಕ್ರಮ ವಹಿಸುವುದು.
- ಮೇಲ್ಕಂಡ ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸುವ ಮೂಲಕ ಪ್ಲಾಸ್ಟಿಕ್ ನಿಷೇಧ ಅಧಿಸೂಚನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಹಾಗೂ ಸರ್ಕಾರದ ಆದೇಶವನ್ನು ಪಾಲಿಸಲು ಕ್ರಮವಹಿಸುವಂತೆ ಕೋರಲಾಗಿದೆ.

4. ಈ ಬಗ್ಗೆ ಕೂಡಲೇ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ ಮತ್ತು ದೇವಸ್ಥಾನ ಹಾಗೂ ಧಾರ್ಮಿಕ ಕೇಂದ್ರಗಳ ಮುಖ್ಯಸ್ಥರುಗಳಿಗೆ ನಿರ್ದೇಶನ ನೀಡುವಂತೆ ಹಾಗೂ ಈ ಮೂಲಕ ಸರ್ಕಾರದ ಆದೇಶವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಅಗತ್ಯ ಕ್ರಮವಹಿಸಲು ಕೋರಿದೆ.

13/7/22

(ಹೆಚ್.ಸಿ ರಾಜೇಂದ್ರ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ),
(ಜೀವಿಪರಿಸ್ಥಿತಿ ಮತ್ತು ಪರಿಸರ)
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ.

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ – ಇವರಿಗೆ ಇಂದಿನ ಸಂಚಿಕೆಯಲ್ಲಿ ಪ್ರಕಟಿಸಿ ಅದರ 200 ಪ್ರತಿಗಳನ್ನು ಇಲಾಖೆಯ ಉಪಯೋಗಕ್ಕಾಗಿ ಒದಗಿಸುವಂತೆ ಕೋರಿದೆ.

WWW.LIVELAW.IN

ಪ್ರತಿಯನ್ನು:

1. ~~ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ,~~ ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಮಲೆಮಹದೇಶ್ವರ ವಾರ್ತಾ ಭವನ, ಮಿಂಟೋ ಆಸ್ಪತ್ರೆ ಎದುರು, ಬೆಂಗಳೂರು.
6. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, "ಪರಿಸರ ಭವನ" 1 ರಿಂದ 5ನೇ ಮಹಡಿ, ಚರ್ಚ್ ಸ್ಟ್ರೀಟ್, ಬೆಂಗಳೂರು-560 001.
7. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
9. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
10. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
11. ಡೈರೆಕ್ಟರ್ ಜನರಲ್, ಎಂಪ್ರಿ (EMPRI), ಹಸಿರು ಭವನ, ದೊರೆಸಾನಿಪಾಳ್ಯ ಫಾರೆಸ್ಟ್ ಕ್ಯಾಂಪಸ್, ವಿನಾಯಕನಗರ ವೃತ್ತ, ಜೆ.ಪಿ.ನಗರ 5ನೇ ಹಂತ, ಬೆಂಗಳೂರು-560 078.
12. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
13. ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
14. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ
15. ಸರ್ಕಾರದ ಕಾರ್ಯದರ್ಶಿಗಳು (ಜೀವಿಪರಿಸ್ಥಿತಿ ಮತ್ತು ಪರಿಸರ), ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ.
16. ವಿಶೇಷ ನಿರ್ದೇಶಕರು (ತಾಂತ್ರಿಕ ಕೋಶ), (ಜೀವಿಪರಿಸ್ಥಿತಿ ಮತ್ತು ಪರಿಸರ), ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
17. ಹೆಚ್ಚುವರಿ ಪ್ರತಿಗಳು / ಶಾಖಾ ರಕ್ಷಾ ಕಡತಕ್ಕೆ.

WWW.LIVELAW.IN

File No. DPAR-RIC/10/2019-R AND I-DPAR AR SEC

ಇ-ಮೇಲ / ಕ್ಯಾಷ್ / ಅಷ್ಟ ರಾವ
ಪ್ರತಿಯನ್ನು ......... ರ ವರೆಗೆ
ಕಳುಹಿಸಲಾಗಿದೆ
ಮು.ಕಾ.ಸಿ.ಅ. ಕಛೇರಿ

## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 10 ಸ್ವೀರಸ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 02-07-2019.

### ಸುತ್ತೋಲೆ

**ವಿಷಯ:** ಸರ್ಕಾರದಿಂದ ಆಯೋಜಿಸಲ್ಪಡುವ ಸಭೆ ಸಮಾರಂಭಗಳಲ್ಲಿ ಮತ್ತು ಸರ್ಕಾರಿ ಕಛೇರಿಗಳಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂ: ಅಪಜೀ 17 ಇಪಿಸಿ 2012, ದಿನಾಂಕ: 11-03-2016.
2. ಸರ್ಕಾರದ ಆದೇಶ ಸಂ: ಸಿಆಸುಇ 83 ರಾಸವಿ 2018, ದಿನಾಂಕ: 05-09-2018.

***

ಪ್ಲಾಸ್ಟಿಕ್ ವಸ್ತುಗಳ ಬಳಕೆ ಅಲ್ಪಾವಧಿ ಹಾಗೂ ದೀರ್ಘಾವಧಿಯಲ್ಲಿ ಪರಿಸರಕ್ಕೆ ಹಾನಿಯನ್ನು ಮತ್ತು ಆರೋಗ್ಯಕ್ಕೆ ಅಪಾಯವನ್ನು ಉಂಟುಮಾಡಲು ಕಾರಣವಾಗಿರುತ್ತದೆ. ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚಗಳು, ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆಗಳು ಮತ್ತು ಥರ್ಮೋಕೋಲ್‌ನಿಂದ ತಯಾರಿಸಲಾದ ವಸ್ತುಗಳ ವ್ಯಾಪಕ ಬಳಕೆಯಿಂದ ಪರಿಸರಕ್ಕೆ ಅಗಾದ ಹಾನಿ ಮತ್ತು ಮಾನವ ಮತ್ತಿತರ ಪ್ರಾಣಿಗಳ ಆರೋಗ್ಯಕ್ಕೆ ಅಪಾಯ ಉಂಟುಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಬಳಸಿ ಬಿಸಾಡಿದ ಪ್ಲಾಸ್ಟಿಕ್ ತ್ಯಾಜ್ಯಗಳು, ಚರಂಡಿಗಳ, ಮೋರಿಗಳ ಮತ್ತು ಒಳಚರಂಡಿಗಳ ಸರಾಗ ಹರಿವಿಗೆ ತಡೆಯನ್ನು ಉಂಟುಮಾಡುವುದರ ಜೊತೆಗೆ ಜಲ ಕಾಯಗಳ ಮಾಲಿನ್ಯಕ್ಕೆ ಕಾರಣವಾಗುತ್ತಿರುವುದನ್ನು ಗಮನಿಸಿದೆ.

ಸರ್ಕಾರದ ಕಟ್ಟು-ನಿಟ್ಟಿನ ಸೂಚನೆಗಳಿದ್ದರೂ ಸಹ ಸರ್ಕಾರದ ಅಧಿಕೃತ ಸಭೆ ಸಮಾರಂಭಗಳಲ್ಲಿ ಮತ್ತು ಕಾರ್ಯಾಗಾರಗಳಲ್ಲಿ ಪ್ಲಾಸ್ಟಿಕ್ ತಟ್ಟೆ ಉಪಯೋಗಿಸುವುದನ್ನು, ಪ್ಲಾಸ್ಟಿಕ್ ಲೋಟಗಳಲ್ಲಿ ಕುಡಿಯುವ ನೀರು ಮತ್ತು ಪೇಪರ್ ಕಪ್‌ಗಳಲ್ಲಿ ಕಾಫಿ ಮತ್ತು ಟೀ ಸರಬರಾಜನ್ನು ಮಾಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಹಾಗೂ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ ಆಯೋಜಿಸುವ ಸಭೆ-ಸಮಾರಂಭ, ಕಾರ್ಯಾಗಾರ ಮತ್ತು ಸರ್ಕಾರಿ ಕಛೇರಿಗಳಲ್ಲಿ ಏಕ ಕಾಲಿಕ ಬಳಕೆಯ ಪ್ಲಾಸ್ಟಿಕ್ ಬಾಟಲ್‌ಗಳಲ್ಲಿ ಪ್ಯಾಕ್ ಮಾಡಿದ ನೀರು, ಪ್ಲಾಸ್ಟಿಕ್ ತಟ್ಟೆ ಇದರ ಬದಲಾಗಿ, ಉತ್ತಮ ಗುಣಮಟ್ಟದ ಕುಡಿಯುವ ನೀರನ್ನು ಗ್ಲಾಸ್, ಸ್ಟೀಲ್ ಹಾಗೂ ಮತ್ತಿತರ ಪ್ಲಾಸ್ಟಿಕ್ ಅಲ್ಲದ ಲೋಟಗಳಲ್ಲಿ ಸರಬರಾಜು ಮಾಡಲು ಕ್ರಮ ವಹಿಸತಕ್ಕದ್ದು. ಪ್ಲಾಸ್ಟಿಕ್ ಟೀ ಲೋಟ, ಪ್ಲಾಸ್ಟಿಕ್ ಚಮಚಗಳು ಸರಬರಾಜು / ಬಳಕೆ ಮಾಡುವುದನ್ನು ನಿಷೇಧಿಸಿದೆ.

(ವಿ.ಮಂಜುಳ)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಿಆಸುಇ (ಆಡಳಿತ ಸುಧಾರಣೆ).

**ಇವರಿಗೆ,**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರವರಿಗೆ ರವಾನಿಸುತ್ತಾ, ಈ ಆದೇಶವನ್ನು ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದು.

**ಪ್ರತಿ:**

1) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
2) ಎಲ್ಲಾ ಇಲಾಖಾ ಮುಖ್ಯಸ್ಥರು.
3) ಸರ್ಕಾರದ ಎಲ್ಲಾ ನಿಗಮ / ಮಂಡಳಿಗಳ ಅಧ್ಯಕ್ಷರು / ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು / ವ್ಯವಸ್ಥಾಪಕ ನಿರ್ದೇಶಕರು ಹಾಗೂ ವಿಶ್ವವಿದ್ಯಾನಿಲಯಗಳ ಕುಲಪತಿಗಳು.
4) ಎಲ್ಲಾ ಜಿಲ್ಲಾಧಿಕಾರಿಗಳು.
5) ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6) ಎಲ್ಲಾ ಜಿಲ್ಲೆಗಳ ಪೊಲೀಸ್ ವರಿಷ್ಠಾಧಿಕಾರಿಗಳು.
7) ಶಾಖಾ ರಕ್ಷಾ ಕಡತ.



Scanned with CamScanner